ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಖಾಸಗಿ ಶಾಲೆಗಳ ಶುಲ್ಕ ಪಾವತಿ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) :-

839 (876) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ಹೊರಡಿಸಿರುವ ಹೊಸ ಅಧಿಸೂಚನೆಯಂತೆ ಪೋಷಕರು ಈ ಶೈಕ್ಷಣಿಕ ವರ್ಷದ ಪೂರ್ತಿ ಶುಲ್ಕ ಭರಿಸಬೇಕಿದ್ದು, ಇದು ಪೋಷಕರಿಗೆ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗಾಗಲೇ ಖಾಸಗಿ ಶಾಲೆಗಳು ಆನ್‌ಲೈನ್ ಬೋದನೆಗೆ ಪ್ರತ್ಯೇಕ ಶುಲ್ಕ ಪಡೆದುಕೊಂಡಿ ರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಈ ನೂತನ ಶುಲ್ಕದಲ್ಲಿ ಆನ್‌ಲೈನ್ ಶುಲ್ಕ ಸೇರಿರುತ್ತದೆಯೇ; (ವಿವರ ನೀಡುವುದು)

(ಇ) ಸರ್ಕಾರ ನಿಗದಿಪಡಿಸಿರುವ ಶುಲ್ಕ ಪದ್ದತಿಯನ್ನು ಎಲ್ಲಾ ಖಾಸಗಿ ಶಾಲೆಗಳು ಅನುಸರಿಸಲು ಕ್ರಮ ಕೈಗೊಳ್ಳಲಾಗುವುದೇ; ಖಾಸಗಿ ಶಾಲೆಗಳ ಏಕರೂಪ ಶುಲ್ಕ ನೀತಿಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಅಧಿಕೃತವಾಗಿ ಅನುಮತಿಯನ್ನು ಪಡೆಯದ ಖಾಸಗಿ ಟ್ಯೂಷನ್ ಕೇಂದ್ರಗಳು ಮನಸೋ ಇಚ್ಛೆ ಶುಲ್ಕ ಪಡೆದು ಪೋಷಕರಿಗೆ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗುತ್ತದೆ?